ಪ್ರಜಾವಾಣಿ
ಕರ್ನಾಟಕದ ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

**Thursday 10th August 2023, Page No.3B**

**RVCE: Brand Bangalore-Green Bangalore suggestion in seminar**

# ಮುಂದಿನ ಪೀಳಿಗೆಗಾಗಿ ಹಸಿರುಮಯ ನಗರ

## ‘ಬ್ರ್ಯಾಂಡ್ ಬೆಂಗಳೂರು– ಹಸಿರು ಬೆಂಗಳೂರು’ ವಿಚಾರ ಸಂಕಿರಣದಲ್ಲಿ ಸಲಹೆ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ಮುಂದಿನ ಪೀಳಿಗೆಗೆ ಉತ್ತಮ ಪರಿಸರ ಕಲ್ಪಿಸಲು ನಗರವನ್ನು ಹಸಿರುಮಯವಾಗಿಸಲು ಯೋಜನೆ ರೂಪಿಸಿ, ಕ್ರಮ ಕೈಗೊಳ್ಳಲಾಗುವುದು ಎಂದು ಬಿಬಿಎಂಪಿ ಅರಣ್ಯ ವಿಭಾಗದ ವಿಶೇಷ ಆಯುಕ್ತೆ ಪ್ರೀತಿ ಗೆಹ್ಲೋಟ್ ತಿಳಿಸಿದರು.

‘ಬ್ರ್ಯಾಂಡ್ ಬೆಂಗಳೂರು’ ಯೋಜನೆಯಡಿ ‘ಹಸಿರು/ಪರಿಸರ ಬೆಂಗಳೂರು’ ವಿಷಯಕ್ಕೆ ಸಂಬಂಧಿಸಿದಂತೆ ಆರ್.ವಿ .ತಾಂತ್ರಿಕ ಮಹಾವಿದ್ಯಾಲಯದಲ್ಲಿ ಬುಧವಾರ ನಡೆದ ವಿಚಾರ ಸಂಕಿರಣದಲ್ಲಿ ಅವರು ಮಾತನಾಡಿದರು.

ಮುಂದಿನ 25-30 ವರ್ಷಗಳಲ್ಲಿ ಸಂಪೂರ್ಣ ಬೆಂಗಳೂರನ್ನು ಹಸಿರು-ಮಯವಾಗಿಸಬೇಕು. ಈ ಸಂಬಂಧ ನಾಗರಿಕರಿಂದ ಬಂದಂತಹ ಸಲಹೆಗಳನ್ನು ಕ್ರೋಢೀಕರಿಸಿ ಉತ್ತಮ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಶಾಲಾ-ಕಾಲೇಜು, ಶೈಕ್ಷಣಿಕ ಸಂಸ್ಥೆಗಳ ಜೊತೆ ಒಡಂಬಡಿಕೆ ಮಾಡಿಕೊಂಡು, ಸಸಿಗಳನ್ನು ನೆಟ್ಟು ಅವು ಬೆಳೆಯುವವರೆಗೆ ಪೋಷಣೆ ಮಾಡಲು ವಿದ್ಯಾರ್ಥಿಗಳಿಗೆ ಜವಾಬ್ದಾರಿ ನೀಡಲಾಗಿದೆ. ಆ ಸಸಿಗೆ ವಿದ್ಯಾರ್ಥಿಗಳ ಹೆಸರನ್ನು ಶಾಶ್ವತವಾಗಿ ಇಡುವ ಯೋಜನೆ ರೂಪಿಸಲಾಗಿದ್ದು, ಈಗಾಗಲೇ ಕಾರ್ಯಪ್ರವೃತ್ತರಾಗಿ ಕೆಲಸ ಮಾಡಲಾಗುತ್ತಿದೆ ಎಂದರು.

ಬಿಬಿಎಂಪಿ ಉಪ ಅರಣ್ಯ ಸಂರಕ್ಷಣಾಧಿಕಾರಿಯಾದ ಸರೀನಾ ಸಿಕ್ಕಲಿಗರ್, ಕೆರೆಗಳ ವಿಭಾಗದ ಮುಖ್ಯ ಎಂಜಿನಿಯರ್ ವಿಜಯ್ ಕುಮಾರ್ ಹರಿದಾಸ್, ಆರ್.ವಿ. ತಾಂತ್ರಿಕ ಮಹಾ-ವಿದ್ಯಾಲಯದ ಪ್ರಾಂಶುಪಾಲ ಕೆ.ಎನ್ ಸುಬ್ರಮಣ್ಯ, ಕಾಲೇಜು ವಿದ್ಯಾರ್ಥಿಗಳು ಇದ್ದರು.

### ಪ್ರಮುಖ ಸಲಹೆಗಳು

- ಸಾರ್ವಜನಿಕ ಹಾಗೂ ಖಾಸಗಿ ಸ್ಥಳಗಳಲ್ಲಿ ಸಸಿಗಳನ್ನು ನೆಡುವುದು
- ಕೆರೆಗಳಿಗೆ ಕಲುಷಿತ ನೀರು ಸೇರದಂತೆ ಕ್ರಮವಹಿಸುವುದು
- ಶೇ 100ರಷ್ಟು ತ್ಯಾಜ್ಯ ನೀರು ಶುದ್ಧೀಕರಣ ಹಾಗೂ ಶುದ್ಧೀಕರಣ ಘಟಕಗಳ ವಿಕೇಂದ್ರಿಕರಣ
- ಬೆಂಗಳೂರು ನಗರ ವ್ಯಾಪ್ತಿಯ ಅರಣ್ಯ ಸಂಪತ್ತಿನ ರಕ್ಷಣೆ
- ಅಪಾರ್ಟ್‌ಮೆಂಟ್‌ಗಲ್ಲಿ ಎಸ್.ಟಿ.ಪಿ ನಿರ್ಮಾಣ ಕಡ್ಡಾಯ ಮಾಡುವುದು
- ಮರ/ ಸಸಿಗಳನ್ನು ಕಡಿಯದೆ ಕಾಮಗಾರಿಗಳ ವಿನ್ಯಾಸ ರೂಪಿಸುವುದು
- ನೆಟ್ಟ ಸಸಿಗಳು ಬೆಳವಣಿಗೆ ಹಾಗೂ ನಾಶದ ಬಗ್ಗೆ ನಿಖರ ಮಾಹಿತಿ ಸಂಗ್ರಹ
- ಎಲ್ಲ ಕೆರೆಗಳ ಪುನಶ್ಚೇತನ ಹಾಗೂ ನಿರ್ವಹಣೆ
- ಪರಿಸರ ಉಳಿಸಲು ಮಕ್ಕಳಿಗೆ ಶಿಕ್ಷಣ ಹಾಗೂ ಜಾಗೃತಿ
- ಬಿಬಿಎಂಪಿ, ಜಲಮಂಡಳಿ, ಬಿಡಿಎ ಇಲಾಖೆಗಳ ಸಮನ್ವಯದಿಂದ ಪರಿಸರ ವೃದ್ಧಿ ಕಾರ್ಯ
- ಹೊಸ ವಾಹನ ಖರೀದಿಸುವವರಿಗೆ ಸಸಿಗಳನ್ನು ಉಡುಗೊರೆಯಾಗಿ ನೀಡಿ, ಪೋಷಿಸಲು ಜಾಗೃತಿ ಮೂಡಿಸುವುದು
- ಉದ್ಯಾನಗಳಲ್ಲಿ ಸಸಿಗಳನ್ನು ನೆಟ್ಟು ಬೆಳೆಸುವ ಯೋಜನೆ
- ರಸ್ತೆ ಬದಿ, ಉದ್ಯಾನ, ಮನೆಗಳ ಬಳಿ ಇಂಗು ಗುಂಡಿಗಳನ್ನು ನಿರ್ಮಿಸಿ ಅಂತರ್ಜಲ ಮಟ್ಟ ಹೆಚ್ಚಿಸುವುದು